**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ವಿವಿಧ ಸ್ನಾತಕೋತ್ತರ ಕೋರ್ಸುಗಳಿಗೆ ಶುಲ್ಕ ನಿಗದಿಪಡಿಸುವ ಬಗ್ಗೆ.

ಓದಲಾಗಿದೆ:
1. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ರವರ ಪತ್ರ ಸಂಖ್ಯೆ: ಕಾಶಿಇ/ಶೈವಿ/12/ಸ್ನಾತಕೋತ್ತರ ಶುಲ್ಕ / 2022-23,ದಿನಾಂಕ. 25-05-2023
2. ಸರ್ಕಾರದ ಆದೇಶ ಸಂಖ್ಯೆ. ಇಡಿ 177 ಯುಎನ್‌ಇ 2022. ದಿನಾಂಕ: 30-06-2022.

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ದಿನಾಂಕ: 25.05.2023ರ ಪತ್ರದಲ್ಲಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರು ಕಾಲೇಜು ಶಿಕ್ಷಣ ಇಲಾಖೆಗೆ ವ್ಯಾಪ್ತಿಗಳೊಪಡುವ ಕೆಲವು ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ವಿವಿಧ ಸ್ನಾತಕೋತ್ತರ ಪದವಿ ತರಗತಿಗಳಿಗೆ ಶುಲ್ಕ ನಿಗಧಿಪಡಿಸುವ ಕುರಿತಂತೆ (ಎಂ.ಬಿ.ಎ ಮತ್ತು ಎಂ.ಸಿ.ಎ ಕೋರ್ಸ್‌ಗಳನ್ನೊಳಗೊಂಡತೆ) 2021-22ನೇ ಶೈಕ್ಷಣಿಕ ವರ್ಷದಲ್ಲಿ ನಿಗದಿಪಡಿಸಲಾದ ಶುಲ್ಕವನ್ನ ಮುಂದುವರಿಸಲು ನಿರ್ದೇಶಿಸಲಾಗಿದ್ದು, ಅದರಂತೆ 2022-23ನೇ ಸಾಲಿನಲ್ಲಿಯು ಶುಲ್ಕವನ್ನು ನಿಗದಿಪಡಿಸಲಾಗಿರುತ್ತದೆ.

ಪ್ರಸ್ತುತ, 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿಗೆ ಕಾಲೇಜು ಶಿಕ್ಷಣ ಇಲಾಖೆಗೆ ವ್ಯಾಪ್ತಿಗಳೊಪಡುವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಎಂ.ಬಿ.ಎ ಹಾಗೂ ಎಂ.ಸಿ.ಎ ಕೋರ್ಸ್‌ಗಳಿಗೆ 2022-23ನೇ ಶೈಕ್ಷಣಿಕ ಸಾಲಿನಲ್ಲಿ ನಿಗದಿಪಡಿಸಲಾಗಿದ್ದ ಶುಲ್ಕ ವಿನ್ಯಾಸವನ್ನ ಮುಂದುವರೆಸುವುದೇ ಅಥವಾ ಶುಲ್ಕಗಳನ್ನು ಹೆಚ್ಚಿಸಲು ಸರ್ಕಾರವು ಇಚ್ಛಿಸಿದ್ದಲ್ಲಿ, ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಹಾಗೂ ಪೋಷಕರಿಗೆ ಹೆಚ್ಚಿನ ಆರ್ಥಿಕ ಹೊರೆಯಾಗದಂತೆ ಸರ್ಕಾರದಿಂದ ಪರಿಷ್ಕೃತ ಶುಲ್ಕ ವಿನ್ಯಾಸ ಪಟ್ಟಿ ಆದೇಶವನ್ನು ನೀಡುವಂತೆ ಕೋರಲಾಗಿರುತ್ತದೆ.

ಮೇಲೆ ಓದಲಾದ (2) ದಿನಾಂಕ:30.06.2022ರ ಆದೇಶದಲ್ಲಿ ಕೋವಿಡ್ -19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯು 2019-20 ನೇ ಸಾಲಿನಲ್ಲಿ ನಿಗಧಿಪಡಿಸಿದ ಶುಲ್ಕವನ್ನೇ 2020-21, 2021-22ನೇ ಸಾಲಿಗೆ ನಿಗಧಿಪಡಿಸಿದ್ದು, ನಂತರ ಈ ಶುಲ್ಕವನ್ನ 2022-23 ನೇ ಸಾಲಿಗೂ ಅನ್ವಯಿಸುವಂತೆ ನಿಗಧಿಪಡಿಸಿ ಆದೇಶಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ದಿನಾಂಕ:30-06-2022 ರಲ್ಲಿ 2022-23 ನೇ ಸಾಲಿಗೆ ನಿಗಧಿಪಡಿಸಿದ ಶುಲ್ಕವನ್ನೇ, 2023-24 ನೇ ಸಾಲಿಗೂ ನಿಗಧಿಪಡಿಸಲು ನಿರ್ಧರಿಸಿ, ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 177 ಯುಎನ್‌ಇ 2022,**
**ಬೆಂಗಳೂರು, ದಿನಾಂಕ:25.09.2023.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ವಿವಿಧ ಸ್ನಾತಕೋತ್ತರ ಪದವಿ ತರಗತಿಗಳಿಗೆ (ಎಂ.ಬಿ.ಎ., ಮತ್ತು ಎಂ.ಸಿ.ಎ ಸ್ನಾತಕೋತ್ತರ ಕೋರ್ಸುಗಳನ್ನು ಒಳಗೊಂಡಂತೆ) 2022-23ನೇ ಶೈಕ್ಷಣಿಕ

...2

ಸಾಲಿಗೆ ನಿಗಧಿಪಡಿಸಲಾದ ಶುಲ್ಕವನ್ನೇ, 2023-24ನೇ ಸಾಲಿಗೂ ಸಹ ಅನ್ವಯಿಸಿ, ಈ ಕೆಳಗಿನಂತೆ ನಿಗಧಿಗೊಳಿಸಿ ಆದೇಶಿಸಿದೆ.

1. **ಸ್ನಾತಕೋತ್ತರ ಕೋರ್ಸುಗಳ ಶುಲ್ಕದ ವಿವರ: (ಎಂ.ಬಿ.ಎ ಹೊರತುಪಡಿಸಿ)**

| ಕ್ರ. ಸಂ. | ವಿವರ | 2023-24ನೇ ಸಾಲಿಗೆ ನಿಗಧಿಪಡಿಸಬೇಕಾಗಿರುವ ಶುಲ್ಕ |
|---|---|---|
| 1 | ಅರ್ಜಿ ಶುಲ್ಕ | 50-00 |
| 2 | ಪ್ರವೇಶ ಶುಲ್ಕ | 100-00 |
| 3 | ಪಾಠ ಶುಲ್ಕ | 1000-00 |
| 4 | ಪ್ರಯೋಗಾಲಯ ಶುಲ್ಕ | 300-00 |
| 5 | ವೈದ್ಯಕೀಯ ತಪಾಸಣಾ ಶುಲ್ಕ | 30-00 |
| 6 | ವರ್ಗಾವಣೆ ಶುಲ್ಕ | 50-00 |
| 7 | ವಿದ್ಯಾಭ್ಯಾಸ ಪ್ರಮಾಣ ಪತ್ರ | 20-00 |
| 8 | ವಾಚನಾಲಯ ಶುಲ್ಕ | 100-00 |
| 9 | ಕ್ರೀಡಾ ಶುಲ್ಕ | 100-00 |
| 10 | ಗ್ರಂಥಾಲಯ ಶುಲ್ಕ (ಬೈಂಡಿಂಗ್ ಸೇರಿ) | 100-00 |
| 11 | ಸ್ನಾತಕೋತ್ತರ ವಿಭಾಗ ಅಭಿವೃದ್ಧಿ ಶುಲ್ಕ | 1000-00 |
| 12 | ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿ | (ಸಾರ್ವಜನಿಕ ಶಿಕ್ಷಣ ಇಲಾಖೆಯ ಶುಲ್ಕ ನಿಗಧಿಪಡಿಸಿದಂತೆ) |
| 13 | ಅಧ್ಯಾಪಕರ ಸಹಾಯ ನಿಧಿ | |
| 14 | ಪ್ರವೇಶ ಶುಲ್ಕ | ಆಯಾ ವಿಶ್ವವಿದ್ಯಾಲಯಗಳು ಶುಲ್ಕ ನಿಗಧಿಪಡಿಸಿದಂತೆ |
| 15 | ನೋಂದಣಿ ಶುಲ್ಕ | |
| 16 | ಪರೀಕ್ಷಾ ಶುಲ್ಕ | |
| 17 | ಇನ್ನಿತರೆ ವಿಶ್ವವಿದ್ಯಾಲಯ ಶುಲ್ಕ | |

ಎಂ.ಬಿ.ಎ. ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ಸಾಮಾನ್ಯ ವಿದ್ಯಾರ್ಥಿಗಳಿಗೆ ಸರ್ಕಾರವು ಹಿಂದಿನ ಶೈಕ್ಷಣಿಕ ಸಾಲುಗಳಲ್ಲಿ ನಿಗಧಿಪಡಿಸಲಾಗಿದ್ದ ವಾರ್ಷಿಕ ರೂ. 20,000/-ಗಳ ಶುಲ್ಕವನ್ನೇ 2023-24ನೇ ಶೈಕ್ಷಣಿಕ ಸಾಲಿಗೆ ನಿಗಧಿಪಡಿಸಲಾಗಿದೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ಎಂ.ಬಿ.ಎ., ಮತ್ತು ಎಂ.ಸಿ.ಎ ಸ್ನಾತಕೋತ್ತರ ಕೋರ್ಸುಗಳು ಸೇರಿದಂತೆ, ವಿವಿಧ ಸ್ನಾತಕೋತ್ತರ ಕೋರ್ಸುಗಳಿಗಾಗಲೀ ಹಾಗೂ ಈ ಸಂಬಂಧ ಯಾವುದೇ ಚಟುವಟಿಕೆಗಳಿಗಾಗಲಿ ಹೆಚ್ಚುವರಿ ಅನುದಾನವನ್ನು ಕೋರಬಾರದು ಎಂಬ ಷರತ್ತಿಗೊಳಪಟ್ಟು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

<u>ಇವರಿಗೆ:</u>

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು 560 001.

...3

O

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/12/ಸ್ನಾ.ಪ.ಶು/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560 001.
ದಿನಾಂಕ: 30.09.2023

**ಪರಿಚಲನಾ ಆದೇಶ**

2023-24ನೇ ಶೈಕ್ಷಣಿಕ ಸಾಲಿಗೆ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ವಿವಿಧ ಸ್ನಾತಕೋತ್ತರ ಕೋರ್ಸುಗಳಿಗೆ ಶುಲ್ಕ ನಿಗಧಿಪಡಿಸುವ ಕುರಿತು ಸರ್ಕಾರದಿಂದ ಹೊರಡಿಸಿರುವ ಸರ್ಕಾರಿ ಆದೇಶ ಸಂಖ್ಯೆ: ಇಡಿ 177 ಯುಎನ್ಇ 2022, ಬೆಂಗಳೂರು ದಿನಾಂಕ:25.09.2023ನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ: ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:

1. ರಾಜ್ಯದ ಎಲ್ಲಾ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು ಧಾರವಾಡ ಮತ್ತು ಕಲಬುರಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
4. ನೋಡಲ್ ಅಧಿಕಾರಿಗಳು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು-560 001.

ಪ್ರತಿಯನ್ನು:

1. ಸರ್ಕಾರದ ಅಧೀನ ಕಾರ್ಯದರ್ಶಿಗಳ ಆಪ್ತ ಶಾಖೆಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
2. ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರುಗಳ ಆಪ್ತ ಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು.
3. ಲೆಕ್ಕಾಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
4. ಕಛೇರಿ ಪ್ರತಿ.